ಒಂದಂಕಿ ಲಾಟರಿ ಟಿಕೇಟುಗಳ ಕುರಿತು

2050 - ಶ್ರೀ ರಾಮಲಿಂಗಾರೆಡ್ಡಿ (ಜಯನಗರ) : ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರಿನಲ್ಲಿ ಇತರ ರಾಜ್ಯಗಳ ಒಂದಂಕಿ ಲಾಟರಿ ಟಿಕೇಟುಗಳ ಮಾರಾಟ ವಾಗುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಇದನ್ನು ನಿಲ್ಲಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು?

ಶ್ರೀ ಸಿದ್ದರಾಮಯ್ಯ (ಉಪಮುಖ್ಯಮಂತ್ರಿಗಳು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಶ್ರೀ ಕೆ.ಎನ್. ನಾಗೇಗೌಡ (ಭಾರಿ ನೀರಾವರಿ ಸಚಿವರು) : ದಿನಾಂಕ 7ನೇ ಆಗಸ್ಟ್ 97ರಂದು ಉಪವೇಶನ ನಡೆಯದ ಕಾರಣ 24ನೇ ಪಟ್ಟಿಯಲ್ಲಿ15 ಚುಕ್ಕೆ ಗುರುತಿನ ಪ್ರಶ್ನೆಗಳ ಪೈಕಿ 11 ಪ್ರಶ್ನೆಗಳನ್ನು ಲಿಖಿತ ಮೂಲಕ ಉತ್ತರಿಸುವ 62 ಪ್ರಶ್ನೆಗಳ ಪೈಕಿ 41 ಪ್ರಶ್ನೆಗಳ ಉತ್ತರಗಳನ್ನು ಸದನದ ಮುಂದಿಡುತ್ತೇವೆ. ದಿನಾಂಕ 8ನೇ ಆಗಸ್ಟ್ 97ರಂದು ಉಪವೇಶನ ನಡೆಯದ ಕಾರಣ 25ನೇ ಪಟ್ಟಿಯಲ್ಲಿ 15 ಚುಕ್ಕೆ ಗುರುತಿನ ಪ್ರಶ್ನೆಗಳ ಪೈಕಿ 1 ಪ್ರಶ್ನೆಯ ಉತ್ತರವನ್ನು ಹಾಗೂ ಲಿಖಿತ ಮೂಲಕ ಉತ್ತರಿಸುವ 60 ಪ್ರಶ್ನೆಗಳ ಪೈಕಿ 13 ಪ್ರಶ್ನೆಗಳ ಉತ್ತರಗಳನ್ನು ಸದನದ ಮುಂದಿಡುತ್ತೇನೆ.

ಉಪಾಧ್ಯಕ್ಷರು (ಶ್ರೀ ಚಂದ್ರಶೇಖರ್ ಎಂ. ಮಾಮನಿಯವರು) ಪೀಠವನ್ನು ಅಲಂಕರಿಸಿದರು).

ದಿನಾಂಕ 7.8.97ರ ಚುಕ್ಕೆ ಗುರುತಿನ ಪ್ರಶ್ನೋತ್ತರಗಳು

ಚಾಮರಾಜನಗರ - ರಾಮಸಮುದ್ರಗಳಿಗೆ ಕುಡಿಯುವ ನೀರಿನ ಯೋಜನೆ

347 - ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಾಮರಾಜನಗರ- ರಾಮಸಮುದ್ರ ಕುಡಿಯುವ ನೀರಿನ ಯೋಜನೆ ವಿಳಂಬವಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಈ ಯೋಜನೆ ತ್ವರಿತವಾಗಿ ಪೂರ್ಣಗೊಳಿಸಲು ಸರ್ಕಾರವು ಯೋಚಿಸಿದೆಯೇ?

ಶ್ರೀ ಬಿ.ಎನ್. ಬಚ್ಚೇಗೌಡ (ನಗರಾಭಿವೃದ್ಧಿ ಸಚಿವರು) :

ಅ) ಬಂದಿದೆ.